# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

### **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 19-03-2021 ಪ್ರಶ್ನೆ ಸಂಖ್ಯೆ : 1442 (1668)

0ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾ.ದ ದಿನಾಂಕ : 19-03-2021

ಉತ್ತರಿಸುವ ಸಚಿವರು: ಮಾನ್ಯ ಉಪ ಮುಖ್ಯಮಂತ್ರಿ ಗಳು ಹಾಗೂ ಸಾರಿಗೆ ಸಚಿವರು

ವಿಷಯ : ಕೆ.ಎಸ್.ಆರ್.ಟಿ.ಸಿ ಬಸ್‌ಗಳು ಕೊರೊನೋತ್ತರ ಸಂಚಾರ

(ಅ) ರಾಜ್ಯದ ಗ್ರಾಮಾಂತರ ಪ್ರದೇಶಗಳಿಗೆ ಕೊರೋನಾ ಅವಧಿಯಲ್ಲಿ ರದ್ದುಪಡಿಸಿದ್ದ ಬಸ್ ಸಂಚಾರವನ್ನು ಅಷ್ಟೇ ಸಂಖ್ಯೆಯಲ್ಲಿ ಮತ್ತು ಬೇಡಿಕೆಗೆ ತಕ್ಕಂತೆ ಹೆಚ್ಚಿನ ಸಂಖ್ಯೆಯಲ್ಲಿ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ಸುಗಳನ್ನು ಓಡಿಸಲು ಕ್ರಮ ಜರುಗಿಸಲಾಗುವುದೇ; ರಾಜ್ಯಾದಾದ್ಯಂತ ವಿವಿಧ ಸಾರಿಗೆ ನಿಗಮಗಳಿಂದ ಕೊರೊನಾ ಅವಧಿಯಲ್ಲಿ ಎಷ್ಟು ಗ್ರಾಮಾಂತರ ಸಾರಿಗೆ ಬಸ್‌ಗಳನ್ನು ಸ್ಥಗಿತಗೊಳಿಸಲಾಗಿತ್ತು; ಪ್ರಸ್ತುತ ಸಮಯದಲ್ಲಿ ಮತ್ತೆ ಎಷ್ಟು ಬಸ್‌ಗಳನ್ನು ಓಡಿಸಲಾಗುತ್ತಿದೆ; (ವಿವರ ಒದಗಿಸುವುದು)

(ಆ) ರಾಜ್ಯದ ಗ್ರಾಮಾಂತರ ಪ್ರದೇಶಗಳಲ್ಲಿ ಮೊದಲಿನಂತೆ ಮತ್ತು ಅವಶ್ಯಕತೆಗೆ ತಕ್ಕಂತೆ ರಾಜ್ಯ ರಸ್ತೆ ಸಾರಿಗೆ ಬಸ್‌ಗಳನ್ನು ಓಡಿಸದಿರುವುದರಿಂದ ಗ್ರಾಮೀಣ ಜನರು, ಗ್ರಾಮಂತರ ಪ್ರದೇಶದಿಂದ ನಗರಕ್ಕೆ ಹಾಗೂ ಶಾಲಾ ಕಾಲೇಜುಗಳಿಗೆ ಹೋಗುವ ವಿದ್ಯಾರ್ಥಿಗಳಿಗೆ ಅನಾನುಕೂಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?